**ವಿಜಾಪುರನಗರದಲ್ಲಿ ಒಳಚರಂಡಿ ವ್ಯವಸ್ಥೆ**

477 - ಶ್ರೀ ಬಸವನಗೌಡ ರಾ. ಪಾಟೀಲ್ (ವಿಜಾಪುರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ವಿಜಾಪುರ ನಗರದಲ್ಲಿ ಬೆಳೆಯುತ್ತಿರುವ ಬಡಾವಣೆಗಳಿಗೆ ಒಳಚರಂಡಿ ವ್ಯವಸ್ಥೆ ಮಾಡುವ ಉದ್ದೇಶ ಸರ್ಕಾರ ಹೊಂದಿದೆಯೇ? ಹಾಗಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು?*

ಆ) *ಇದಕ್ಕಾಗಿ ಈ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? ಈ ಯೋಜನೆ ಪೂರ್ಣಗೊಳ್ಳಲು ಬೇಕಾಗುವ ಹಣವೆಷ್ಟು?*

ಶ್ರೀ ವೈಜನಾಥ್ ಪಾಟೀಲ್ (ನಗರಾಭಿವೃದ್ಧಿ ಸಚಿವರು) :

ಅ) ಈ ಬಗ್ಗೆ ಈವರೆಗೆ ಯಾವ ಪ್ರಸ್ತಾವನೆಯೂ ಸರ್ಕಾರದ ಮುಂದಿಲ್ಲ.

ಆ) ಉದ್ಭವಿಸುವುದಿಲ್ಲ.

**ಕೇರೂರು ಪಟ್ಟಣಕ್ಕೆ ಐ.ಡಿ.ಎಸ್.ಎಮ್.ಡಿ.ಯೋಜನೆ ಜಾರಿಗೊಳಿಸುವ ಬಗ್ಗೆ**

480 - ಶ್ರೀ ಬಿ.ಬಿ. ಚಿಮ್ಮನ ಕಟ್ಟಿ (ಬಾದಾಮಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) *ಕೇರೂರು ಪಟ್ಟಣ ಅಭಿವೃದ್ಧಿ ಆಗದೆ ಅತೀ ಹಿಂದುಳಿದಿರುವುದು ನಿಜವೇ?*

2) *ಹಾಗಿದ್ದಲ್ಲಿ ಪಟ್ಟಣದ ಸರ್ವತೋಮುಖ ಅಭಿವೃದ್ಧಿಗೆ ಮೀಸಲಾದ ಐಡಿಎಸ್ ಎಂ.ಟಿ ಯೋಜನೆಯನ್ನು 96-97ರಲ್ಲಿ ಅಳವಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? ಹಾಗಿದ್ದಲ್ಲಿ ವಿವರಗಳೇನು?*

ಶ್ರೀ ವೈಜನಾಥ್ ಪಾಟೀಲ್ (ನಗರಾಭಿವೃದ್ಧಿ ಸಚಿವರು) :

1. ಹೌದು.
2. 1996-97ನೇ ಸಾಲಿನಲ್ಲಿಲ್ಲ.

**ಹುಬ್ಬಳ್ಳಿನಗರದಲ್ಲಿ ನಡೆಯುವ ಕೈಗಾರಿಕಾ ವಸ್ತುಪ್ರದರ್ಶನ ಇನಕಾಮೆಕ್ಸ್ 96ಕ್ಕೆ ತಗುಲಿದ ವೆಚ್ಚ**

483 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿಗ್ರಾಮೀಣ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ ಮಹಾನಗರದಲ್ಲಿ ನಡೆಯುತ್ತಿರುವ ಕೈಗಾರಿಕಾ ವಸ್ತುಪ್ರದರ್ಶನ 'ಇನಕಾಮೆಕ್ಸ್-96' ಇದಕ್ಕೆ ಇಲ್ಲಿಯವರೆಗೆ ತಗುಲಿದ ವೆಚ್ಚವೆಷ್ಟು.; ಉದ್ದಿಮೆದಾರರಿಂದ ಸ್ಥಾಲಗಳ ಮುಖಾಂತರ ಸಂಗ್ರಹವಾದ ಹಣವೆಷ್ಟು, ವಸ್ತು ಪ್ರದರ್ಶನದ ಜಾಗ ನೆಹರೂ*